**ಮಾನ್ಯ ಕರ್ನಾಟಕ ವಿಧಾನಪರಿಷತ್ತಿನ ಸದಸ್ಯರಾದ ಶ್ರೀಮತಿ ಉಮಾಶ್ರೀ ರವರು**

**ನಿಯಮ 72ರಡಿ ಕೋರಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.**

**ವಿಷಯ:**

ರಾಜ್ಯ ಸರ್ಕಾರದ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಲ್ಲಿ ವಿದ್ಯಾರ್ಥಿಗಳ ಹಾಜರಾತಿಗೆ ಬಯೋಮೆಟ್ರಿಕ್ ಕಡ್ಡಾಯಗೊಳಿಸಿದೆ. ಆದರೆ, ಬಹುತೇಕ ಹಾಸ್ಟೆಲ್‌ಗಳಲ್ಲಿ ಮ್ಯಾನ್ಯುಯಲ್ ಹಾಜರಾತಿ ಮೂಲಕವೇ ವಿದ್ಯಾರ್ಥಿಗಳ ಲೆಕ್ಕ ಕೊಟ್ಟು ಹಣ ಲೂಟಿ ಹೊಡೆಯುತ್ತಿರುವ ದೂರುಗಳು ಕೇಳಿ ಬಂದಿವೆ. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಬರುವ ರಾಜ್ಯದ ಎಲ್ಲ ವಿದ್ಯಾರ್ಥಿ ನಿಲಯಗಳಿಗೆ ಪ್ರವೇಶ ಪಡೆಯುವ ಪ್ರತಿಯೊಬ್ಬ ವಿದ್ಯಾರ್ಥಿಯ ಹಾಜರಾತಿಯನ್ನು ಬಯೋಮೆಟ್ರಿಕ್ ಮೂಲಕವೇ ದಾಖಲಿಸಬೇಕೆಂಬುದನ್ನು ಕಡ್ಡಾಯಗೊಳಿಸಿ, ರಾಜ್ಯ ಸರಕಾರ 2019 ರಲ್ಲಿಯೇ ಆದೇಶಿಸಿದೆ. ಆದರೆ ಇದನ್ನು ಅಧಿಕಾರಿಗಳು ಪಾಲಿಸದಿರುವ ವಿಷಯವನ್ನು ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ಸಚಿವರ ಗಮನ ಸೆಳೆಯುವ ಬಗ್ಗೆ.

**ಉತ್ತರ:**

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ 1277 ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳು ಹಾಗೂ 1166 ಮೆಟ್ರಿಕ್ ನಂತರ ವಿದ್ಯಾರ್ಥಿನಿಲಯಗಳು ಹೀಗೆ ಒಟ್ಟು 2443 ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿದ್ದು, ಈ ವಿದ್ಯಾರ್ಥಿನಿಲಯಗಳಲ್ಲಿ ಕ್ರಮವಾಗಿ 68,803 ಮತ್ತು 1,59,608 ಹೀಗೆ ಒಟ್ಟು 2,28,411 ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶವನ್ನು ಕಲ್ಪಿಸಲಾಗಿದೆ.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿದ್ಯಾರ್ಥಿನಿಲಯಗಳ ಎಲ್ಲಾ ವಿದ್ಯಾರ್ಥಿಗಳಿಗೆ ಬಯೋಮೆಟ್ರಿಕ್ ಹಾಜಾರಾತಿಯನ್ನು ಕಡ್ಡಾಯಗೊಳಿಸಲಾಗಿರುತ್ತದೆ. ಪ್ರಸ್ತುತ ವರ್ಷದ ವಿದ್ಯಾರ್ಥಿನಿಲಯಗಳಿಗೆ ವಿದ್ಯಾರ್ಥಿಗಳು ಪ್ರವೇಶ ಪಡೆಯಲು ಹಂತ ಹಂತವಾಗಿ ಅವಕಾಶ ಕಲ್ಪಿಸಲಾಗುತ್ತಿದ್ದು ಪ್ರಸ್ತತ ವೃತ್ತಿಪರ ಹಾಗೂ ಸ್ನಾತಕೋತ್ತರ ವಿದ್ಯಾರ್ಥಿನಿಲಯಗಳ ಪ್ರವೇಶ ಪ್ರಕ್ರಿಯೆ ಚಾಲ್ತಿಯಲ್ಲಿದ್ದು, 2023-24ನೇ ಸಾಲಿನ ಪ್ರವೇಶ ಪ್ರಕ್ರಿಯೆ ಸಂಪೂರ್ಣವಾಗಿ ಮುಕ್ತಾಯಗೊಂಡ ನಂತರ ವಿದ್ಯಾರ್ಥಿನಿಲಯಗಳ ಎಲ್ಲಾ ವಿದ್ಯಾರ್ಥಿಗಳ ಹಾಜರಾತಿಯನ್ನು ಕಡ್ಡಾಯವಾಗಿ ಬಯೋಮೆಟ್ರಿಕ್‌ನಲ್ಲಿ ಪಡೆಯಲಾಗುವುದು ಹಾಗೂ ಇಲಾಖೆಯ ಬಯೋಮೆಟ್ರಿಕ್ ತಂತ್ರಾಂಶದಲ್ಲಿ ಕೆಲವು ತೊಂದರೆಗಳಿದ್ದು ಪ್ರಸ್ತುತ ಬಯೋಮೆಟ್ರಿಕ್ ತಂತ್ರಾಂಶವನ್ನು ಸರಿಪಡಿಸಲಾಗಿರುತ್ತದೆ. ಇಲಾಖೆಯ ವಿದ್ಯಾರ್ಥಿನಿಲಯಗಳ ಎಲ್ಲಾ ವಿದ್ಯಾರ್ಥಿಗಳ ಹಾಜರಾತಿಯನ್ನು ಬಯೋಮೆಟ್ರಿಕ್‌ನಲ್ಲಿಯೇ ಪಡೆಯಲು ಕ್ರಮವಹಿಸಲಾಗುತ್ತಿದೆ. ಈ ಬಗ್ಗೆ ಮತ್ತೊಮ್ಮೆ ಸುತ್ತೋಲೆ ಹೊರಡಿಸಿ ಕಡ್ಡಾಯವಾಗಿ ವಿದ್ಯಾರ್ಥಿ ನಿಲಯಗಳ ಹಾಜರಾತಿಯನ್ನು ಬಯೋಮೆಟ್ರಿಕ್ ಮೂಲಕ ಪಡೆಯಲು ಸೂಚಿಸಲಾಗುವುದು.

**ಸಂಖ್ಯೆ:ಹಿಂವಕ 683 ಬಿಂಎಂಎಸ್ 2023**

**(ಶಿವರಾಜ .ಎಸ್. ತಂಗಡಗಿ)**
ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ
ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು